5702452168

F. 63568

# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 141 ಆರ್‌ಟಿಐ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 03.12.2013.

Dir. (Admn)

## ಸುತ್ತೋಲೆ

**ವಿಷಯ:** ಕರ್ನಾಟಕ ಮಾಹಿತಿ ಆಯೋಗದಲ್ಲಿ ವಿಚಾರಣೆಗೆ ಬರುವ ಪ್ರಕರಣಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಅರ್ಜಿದಾರರಿಗೆ ಮಾಹಿತಿ ಒದಗಿಸಿರುವ ಕುರಿತು ಆಯೋಗಕ್ಕೆ ದಾಖಲೆಗಳನ್ನು ಒದಗಿಸುವ ಬಗ್ಗೆ.

**ಉಲ್ಲೇಖ:** ಕರ್ನಾಟಕ ಮಾಹಿತಿ ಆಯೋಗದ ಆದೇಶ ಸಂಖ್ಯೆ: ಕಮಾಆ 2951 ದೂರು 2013, ಕಮಾಆ 4542 ದೂರು 2013, ಕಮಾಆ 3108, ದೂರು 2013 ಮತ್ತು ಕಮಾಆ 4616 ದೂರು 2013, ದಿನಾಂಕ: 29.10.2013

---

ಕರ್ನಾಟಕ ಮಾಹಿತಿ ಆಯೋಗವು ತನ್ನ ಮುಂದೆ ದಾಖಲಾಗಿದ್ದ ಉಲ್ಲೇಖಿತ ಪ್ರಕರಣಗಳ ವಿಚಾರಣಾ ಸಂದರ್ಭಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕರ್ನಾಟಕ ಮಾಹಿತಿ ಆಯೋಗವು ನೀಡಿರುವ ನಿರ್ದೇಶನಗಳನ್ನು ಪಾಲಿಸದೇ ಇರುವ ಬಗ್ಗೆ ವಿಷಾದ ವ್ಯಕ್ತಪಡಿಸಿ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲು ಸರ್ಕಾರಕ್ಕೆ ಸೂಚನೆಗಳನ್ನು ನೀಡಿರುತ್ತದೆ.

ಕರ್ನಾಟಕ ಮಾಹಿತಿ ಆಯೋಗದಲ್ಲಿ ವಿಚಾರಣೆಗೆ ದಾಖಲಾಗುವ ಪ್ರಕರಣಗಳಿಗೆ ಸಂಬಂಧಪಟ್ಟಂತೆ, ಮಾಹಿತಿ ಕೋರಿಕೆ ಅರ್ಜಿಗಳಿಗೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮಾಹಿತಿ ಒದಗಿಸಿರುವ ಎಲ್ಲಾ ಮಾಹಿತಿಗಳ/ಸ್ವೀಕೃತಿಗಳ ಜೆರಾಕ್ಸ್ ಪ್ರತಿಗಳನ್ನು, ವಿಳಂಬಕ್ಕೆ ಕೊಟ್ಟಿರುವ ಲಿಖಿತ ಕಾರಣಗಳನ್ನು ವಿಚಾರಣೆಗೆ 2ದಿನಗಳ ಮುಂಚೆ ಸಂಬಂಧಪಟ್ಟ ಕೋರ್ಟ್ ಹಾಲಿನ ತೀರ್ಪು ಬರಹಗಾರರಿಗೆ ತಲುಪಿಸುವ ವ್ಯವಸ್ಥೆ ಮಾಡುವಂತೆ ಮತ್ತು ವಿಚಾರಣೆಗೆ ಸಂಬಂಧಪಟ್ಟ ಸಾರ್ವಜನಿಕ ಮಾಹಿತಿ ಅಧಿಕಾರಿ ವಿಚಾರಣಾ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದೆ ಮತ್ತು ದಾಖಲೆಗಳು ಇಲ್ಲ ಎಂಬ ಕಾರಣದಿಂದ ಪ್ರಕರಣಗಳನ್ನು ಮುಂದೂಡಲು ಅವಕಾಶ ನೀಡಬಾರದು ಎಂದು ಈ ಮೂಲಕ ಸೂಚಿಸಲಾಗಿದೆ. ಹಾಗೆಯೇ ಈ ಬಗ್ಗೆ ತಮ್ಮ ಅಧೀನದಲ್ಲಿ ಬರುವ ಕ್ಷೇತ್ರ ಇಲಾಖೆಗಳು, ನಿಗಮ ಮತ್ತು ಮಂಡಳಿ ಇತ್ಯಾದಿಗಳು ಸೂಕ್ತ ಕ್ರಮ ಕೈಗೊಳ್ಳಲು ನಿರ್ದೇಶನ ನೀಡುವಂತೆ ತಿಳಿಸಲಾಗಿದೆ.

(ಪರಮೇಶ್ ಪಾಂಡೆ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)

ಇವರಿಗೆ,

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು

ಮು.ತಿ.ನೋ.

Office work\Right to information-2013\circulars